(68)

ಮಾನ್ಯ ವಿಧಾನ ಪರಿಷತ್ ಸದಸ್ಯರುಗಳಾದ ಶ್ರೀ ಪಿ.ಹೆಚ್.ಪೂಜಾರ್ ಹಾಗೂ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಇವರುಗಳು ನಿಯಮ 330 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಮಾಹಿತಿ.

ವಿಷಯ: ಕೃಷ್ಣಾ ಮೇಲ್ದಂಡೆ ಯೋಜನೆಯು ಉತ್ತರ ಕರ್ನಾಟಕದ ರೈತರ ಜೀವನಾಡಿಯಾಗಿದೆ. 1964ರಲ್ಲಿ ಪ್ರಾರಂಭವಾದ ಯೋಜನೆ, ರಾಜ್ಯ ಸರ್ಕಾರಗಳ ಇಚ್ಚಾಶಕ್ತಿಯ ಕೊರತೆಯಿಂದಾಗಿ, 60 ವರ್ಷಗಳು ಗತಿಸಿದರೂ ಇನ್ನು 50% ದಷ್ಟು ಕೆಲಸಗಳು ಬಾಕಿ ಉಳಿದುಕೊಂಡಿವೆ. ಹಂತ-3ರ ಅಡಿಯಲ್ಲಿ ಕೈಗೊಳ್ಳಬೇಕಾದ ಲಕ್ಷಕ್ಕೂ ಮಿಕ್ಕಿ ಎಕರೆ ಪ್ರದೇಶದ ಭೂಸ್ವಾಧೀನ, ಅನೇಕ ಹಳ್ಳಿಗಳ ಮನೆಗಳ ಭೂಸ್ವಾಧೀನ ಪುನರ್ ವಸತಿ, ಪುನರ್‌ನಿರ್ಮಾಣ ಕಾಮಗಾರಿಗಳು ಆಮೆಗತಿಯಲ್ಲಿ ಸಾಗುತ್ತಿದ್ದು, ರಾಜ್ಯ ತನ್ನ ಪಾಲಿನ ಇನ್ನೂ 130 ಟಿಎಂಸಿ ಯಷ್ಟು ನೀರನ್ನು ಬಳಸಿಕೊಳ್ಳಲು, ಬಾಕಿ ಉಳಿದಿರುವ ಎಲ್ಲಾ ಕಾಮಗಾರಿಗಳನ್ನು ಮುಗಿಸಲು ಯುದ್ಧೋಪಾದಿಯಲ್ಲಿ ಕ್ರಮ ಕೈಗೊಳ್ಳಬೇಕಾಗಿದ್ದು, ಅದಕ್ಕಾಗಿ ಸರ್ಕಾರ ಬಜೆಟ್‌ನಲ್ಲಿಯೂ ಕೂಡ ಹಣ ಕಾಯ್ದಿರಿಸಿರುವುದಿಲ್ಲ. ಇದು ಸಾರ್ವಜನಿಕ ಹಿತಾಸಕ್ತಿವುಳ್ಳ ಅತ್ಯಂತ ಮಹತ್ವದ ವಿಷಯದ ಕುರಿತು.

****

**ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-1 & 2:**

ಕೃಷ್ಣಾ ನ್ಯಾಯಾಧೀಕರಣ-1 ರಲ್ಲಿ ರಾಜ್ಯಕ್ಕೆ ಹಂಚಿಕೆಯಾಗಿರುವ 734 ಟಿ.ಎಂ.ಸಿ. ಪೈಕಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-1 & 2 ರ ಯೋಜನೆಗೆ 173.00 ಟಿ.ಎಂ.ಸಿ. ನೀರಿನ ಹಂಚಿಕೆ ಆಗಿರುತ್ತದೆ. ಸದರಿ ಹಂಚಿಕೆಯಡಿ 11 ಯೋಜನೆಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದ್ದು, ಉತ್ತರ ಕರ್ನಾಟಕದ 5 ಜಿಲ್ಲೆಗಳಾದ ಕಲಬುರಗಿ, ಯಾದಗಿರಿ, ವಿಜಯಪುರ, ಬಾಗಲಕೋಟೆ ಹಾಗೂ ರಾಯಚೂರು ಅಡಿಯಲ್ಲಿ ಸುಮಾರು 6,22,023 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ.

ಯೋಜನೆಗಳ ಅನುಷ್ಠಾನದಿಂದ ಸಂಬಂಧಿಸಿದ 176 ಗ್ರಾಮಗಳು ಬಾಧಿತವಾಗಿದ್ದು, ಈ ಗ್ರಾಮಗಳ ಪುನರ್ವಸತಿಗಾಗಿ 136 ಪುನರ್‌ವಸತಿ ಕೇಂದ್ರಗಳನ್ನು ನಿರ್ಮಿಸಲಾಗಿದೆ. ಇದರಲ್ಲಿ, 134 ಪುನರ್‌ವಸತಿ ಕೇಂದ್ರಗಳನ್ನು ಆಯಾ ಗ್ರಾಮ ಪಂಚಾಯಿತಿಗಳಿಗೆ ಹಸ್ತಾಂತರಿಸಲಾಗಿದೆ. ಉಳಿದ 2 ಕೇಂದ್ರಗಳನ್ನು ಹಸ್ತಾಂತರಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

**ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3:**

ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣ-2 ರ ಅಂತಿಮ ತೀರ್ಪಿನಲ್ಲಿ ರಾಜ್ಯಕ್ಕೆ ಹಂಚಿಕೆಯಾದ ಒಟ್ಟಾರೆ 173 ಟಿ.ಎಂ.ಸಿ. (ನದಿ ಪಾತ್ರದಡಿ ನೈಸರ್ಗಿಕ ಹರಿವು 7 ಟಿ.ಎಂ.ಸಿ ಒಳಗೊಂಡು) ಪೈಕಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ಯೋಜನೆಗೆ 130 ಟಿ.ಎಂ.ಸಿ. ಹಂಚಿಕೆಯಾಗಿರುತ್ತದೆ. ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣ-2 ಅಂತಿಮ ತೀರ್ಪು ಕೇಂದ್ರ ಸರ್ಕಾರದಿಂದ ಗೆಜೆಟ್ ಪ್ರಕಟಣೆ ಆಗಬೇಕಾಗಿರುತ್ತದೆ. ಗೆಜೆಟ್ ಅಧಿಸೂಚನೆ ಹೊರಡಿಸುವ ಬಗ್ಗೆ ಮಾನ್ಯ ಸರ್ವೋಚ್ಚ ನ್ಯಾಯಲಯದ ಆದೇಶವನ್ನು ಮಾರ್ಪಡಿಸಲು ಸೂಕ್ತ ಅಫಿಡವಿಟ್ ಸಲ್ಲಿಸಿ ನಂತರ ನ್ಯಾಯಾಧಿಕರಣದ ಆದೇಶವನ್ನು ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ಕೇಂದ್ರ ಸರ್ಕಾರವನ್ನು ಕೋರಲಾಗಿದೆ. ಸದರಿ ವಿಷಯದ ಕುರಿತು ರಾಜ್ಯ ಸರ್ಕಾರವು ಎಲ್ಲಾ ಆಡಳಿತಾತ್ಮಕ ಹಾಗೂ ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ಯೋಜನೆಗೆ ಹಂಚಿಕೆಯಾದ 130 ಟಿ.ಎಂ.ಸಿ. ನೀರಿನ ಬಳಕೆಗಾಗಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆಯನ್ನು RL 519.60 Mt ದಿಂದ RL 524.256 Mt. ವರೆಗೆ ಎತ್ತರಿಸುವುದು ಒಳಗೊಂಡಿರುತ್ತದೆ.

ಈ ಯೋಜನೆಯಡಿ 9 ಉಪ ಯೋಜನೆಗಳ ಅಂದರೆ, ಮುಳವಾಡ, ಚಿಮ್ಮಲಗಿ, ಹೇರಕಲ್, ಮಲ್ಲಾಬಾದ, ಕೊಪ್ಪಳ ಏತ ನೀರಾವರಿ, ಇಂಡಿ ಹಾಗೂ ರಾಂಪೂರ ಏತ ನೀರಾವರಿ ವಿಸ್ತರಣೆ, ನಾರಾಯಣಪೂರ ಬಲದಂಡೆ ಕಾಲುವೆ ವಿಸ್ತರಣೆ ಹಾಗೂ ಭೀಮಾ ಪ್ಲಾಂಕ ಉಪ-ಯೋಜನೆಗಳ ಅನುಷ್ಠಾನದೊಂದಿಗೆ ಉತ್ತರ ಕರ್ನಾಟಕದ ವಿಜಯಪೂರ, ಬಾಗಲಕೋಟೆ, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ ಹಾಗೂ ಗದಗ ಜಿಲ್ಲೆಗಳಡಿ ಒಟ್ಟಾರೆ 5.94 ಲಕ್ಷ ಹೆಕ್ಟೇರ್ (14.67 ಲಕ್ಷ ಎಕರೆ) ಅಚ್ಚುಕಟ್ಟು ಪ್ರದೇಶಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವುದಾಗಿರುತ್ತದೆ.

ಕೃಮೇ.ಯೋ. ಹಂತ-3ರಡಿ 9 ಉಪ-ಯೋಜನೆಗಳಡಿ ಏತ ನೀರಾವರಿಗಳ ಮುಖ್ಯ ಸ್ಥಾವರಗಳ ನಿರ್ಮಾಣ, ಮುಖ್ಯ ಕಾಲುವೆ / ಶಾಖಾ ಕಾಲುವೆ ಜಾಲದ ನಿರ್ಮಾಣ ಕೈಗೊಂಡಿದ್ದು ಪ್ರಗತಿಯ ವಿವಿಧ ಹಂತದಲ್ಲಿವೆ. ಅಲ್ಲದೇ, ಯೋಜನಾ ವ್ಯಾಪ್ತಿಯಲ್ಲಿ ಬರುವ ಕೆರೆಗಳನ್ನು Gravity ಮುಖಾಂತರ ನೀರು ಹರಿಸಿ ತುಂಬಿಸಲು ಅವಶ್ಯಕ ವಿತರಣಾ ಕಾಲುವೆ ಜಾಲದ ಕಾಮಗಾರಿಗಳನ್ನು ಸಹ ಅನುಷ್ಠಾನಗೊಳಿಸಲಾಗುತ್ತಿದ್ದು ಕಾಮಗಾರಿಗಳು ಪ್ರಗತಿಯ ವಿವಿಧ ಹಂತದಲ್ಲಿವೆ. ಸದರಿ ಕಾಮಗಾರಿಗಳಿಗಾಗಿ ರೂ.18,028.44 ಕೋಟಿ ಅಂದಾಜು ಮೊತ್ತದ ಪೈಕಿ ಇಲ್ಲಿಯವರೆಗೆ ರೂ.11,098.22 ಕೋಟಿ ವೆಚ್ಚ ಭರಿಸಲಾಗಿರುತ್ತದೆ.

**ಕೃಮೇ.ಯೋ. ಹಂತ-3ರಡಿ ಮುಳುಗಡೆ ಹೊಂದುವ 20 ಗ್ರಾಮಗಳ ಪುನರ್ ವಸತಿ ಕುರಿತು:**

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಯೋಜನಾ ಅನುಷ್ಠಾನಕ್ಕಾಗಿ ಒಟ್ಟಾರೆ 1.34 ಲಕ್ಷ ಎಕರೆ ಜಮೀನನ್ನು ಹೊಸ ಭೂಸ್ವಾಧೀನ ಕಾಯ್ದೆಯನ್ವಯ ಭೂಸ್ವಾಧೀನ ಪಡಿಸಿಕೊಳ್ಳುವುದಾಗಿರುತ್ತದೆ.

ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-3ರ ಅನುಷ್ಠಾನಕ್ಕಾಗಿ ಬಾಧಿತಗೊಳ್ಳುವ 20 ಗ್ರಾಮಗಳಿಗೆ ಎದುರಾಗಿ 23 ಪುನರ್ವಸತಿ ಕೇಂದ್ರಗಳನ್ನು ನಿರ್ಮಿಸಲು ಯೋಜಿಸಿದ್ದು, ಇದಕ್ಕಾಗಿ 4,633 ಎಕರೆ ಜಮೀನಿನ ಅವಶ್ಯಕತೆ ಇರುತ್ತದೆ. ಈ ಪೈಕಿ 1846 ಎಕರೆ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲಾಗಿದೆ. ಪ್ರಸ್ತುತ 10 ಕೇಂದ್ರಗಳಲ್ಲಿ ಮೂಲಭೂತ ಸೌಲಭ್ಯ ಕಲ್ಪಿಸುವ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಬಾಕಿ ಉಳಿದ ಕೇಂದ್ರಗಳು ವಿವಿಧ ಹಂತದ ಪ್ರಗತಿಯಲ್ಲಿರುತ್ತವೆ. ಇಲ್ಲಿಯವರೆಗೆ ರೂ.3,448.23 ಕೋಟಿ (ಬಿಟಿಡಿಎ ಸೇರಿದಂತೆ) ವೆಚ್ಚವನ್ನು ಭರಿಸಲಾಗಿದೆ.

**ಕೃಮೇ.ಯೋ. ಹಂತ-3ರಡಿ ಮುಳುಗಡೆ ಹೊಂದುವ ಜಮೀನುಗಳಿಗೆ ಭೂ ಪರಿಹಾರ ನೀಡುವ ಕುರಿತು:**

ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-3ರ ಯೋಜನಾ ಅನುಷ್ಠಾನಕ್ಕಾಗಿ ಒಟ್ಟು 1,33,867 ಎಕರೆ ಜಮೀನು ಹಾಗೂ 20 ಗ್ರಾಮ & ಬಾಗಲಕೋಟೆ ಪಟ್ಟಣದ 10 ವಾರ್ಡ್‌ಗಳಲ್ಲಿನ ಕಟ್ಟಡ ಸೇರಿ ಒಟ್ಟು 25,660 ಕಟ್ಟಡಗಳನ್ನು ಸ್ವಾಧೀನಪಡಿಸಬೇಕಾಗಿದೆ. ಒಟ್ಟಾರೆ, ಮುಳುಗಡೆ ಹೊಂದುವ ಜಮೀನು, ಪುನರ್ವಸತಿ ನಿರ್ಮಾಣಕ್ಕಾಗಿ ಹಾಗೂ ಕಾಲುವೆ ನಿರ್ಮಾಣಕ್ಕಾಗಿ, ಭೂಸ್ವಾಧೀನಪಡಿಸಿಕೊಳ್ಳಲು ರೂ.17,627 ಕೋಟಿ ಮೊತ್ತವನ್ನು ಮೀಸಲಿಡಲಾಗಿದ್ದು, ಈ ಪೈಕಿ ಭೂಸ್ವಾಧೀನಪಡಿಸಿಕೊಂಡ 28,878 ಎಕರೆ ಕ್ಷೇತ್ರಕ್ಕೆ ಇಲ್ಲಿಯವರೆಗೆ ರೂ.3,077.30 ಕೋಟಿ ವೆಚ್ಚವನ್ನು ಭರಿಸಲಾಗಿದೆ. ಪ್ರಗತಿಯ ವಿವರಗಳು ಈ ಕೆಳಗಿನಂತಿವೆ.

(ಎಕರೆ/ ಸಂಖ್ಯೆ)

| ವಿವರಗಳು | ಒಟ್ಟು ಅವಶ್ಯವಿರುವ ಜಮೀನು ಕ್ಷೇತ್ರ | ಭೂಸ್ವಾಧೀನಪಡಿಸಿಕೊಂಡ ಕ್ಷೇತ್ರ |
|---|---|---|
| **ಜಮೀನುಗಳ ಸ್ವಾಧೀನ** | | |
| ಮುಳುಗಡೆ ಜಮೀನು | 75,563 | 2,543 |
| ಪುನರ್ವಸತಿ ಕೇಂದ್ರಗಳ ನಿರ್ಮಾಣಕ್ಕಾಗಿ (20 ಗ್ರಾಮಗಳು & ಬಿಟಿಡಿಎ) | 6,467 | 3,393 |
| ಕಾಲುವೆಗಳ ನಿರ್ಮಾಣಕ್ಕಾಗಿ | 51,837 | 22,942 |
| **ಒಟ್ಟು** | **1,33,867** | **28,878** |
| **ಕಟ್ಟಡಗಳು**(20 ಗ್ರಾಮಗಳು & ಬಿಟಿಡಿಎ) | **25,660** | **2,898** |

ಕಂದಾಯ ಇಲಾಖೆಯ ಒಪ್ಪಂದದ ಐತೀರ್ಪು ಆದೇಶ ದಿನಾಂಕ 25.01.2023 ಅನ್ನು ಒಪ್ಪಿದಲ್ಲಿ ಸದರಿ ಆದೇಶದನ್ವಯ, ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ಕ್ಕೆ ಸೀಮಿತವಾಗಿ ಭೂಸ್ವಾಧೀನಕ್ಕೆ ಒಳಪಡುವ ಒಣ ಭೂಮಿಗೆ ರೂ.20.00 ಲಕ್ಷ ಪ್ರತಿ ಎಕರೆ ಹಾಗೂ ನೀರಾವರಿ/ಬಾಗಾಯತ್ ಜಮೀನುಗಳಿಗೆ ರೂ.24.00 ಲಕ್ಷ ಪ್ರತಿ ಎಕರೆ ರಂತೆ ನಿಗದಿಪಡಿಸಲಾದ Consent Award ರನ್ವಯ ಭೂಪರಿಹಾರ ನೀಡಲು ಕ್ರಮ ವಹಿಸಲಾಗುತ್ತಿದೆ. ಒಪ್ಪಿಗೆ ನೀಡದ ಸಂತ್ರಸ್ಥರಿಗೆ ಹೊಸ ಭೂಸ್ವಾಧೀನ ಕಾಯ್ದೆ ರನ್ವಯ 2013ರ ಕಲಂ 26 ರಿಂದ 30ರ ಪ್ರಕಾರ ಪರಿಹಾರ ನೀಡಲು ಕ್ರಮ ವಹಿಸಲಾಗುತ್ತಿದೆ.

ಅಲ್ಲದೇ, ಕೃಷ್ಣಾ ನದಿಯು ಮಳೆಗಾಲದಲ್ಲಿ ಪ್ರವಾಹದಿಂದ ಹರಿದು ಬರುವ ಲಕ್ಷಾಂತರ ಕ್ಯೂಸೆಕ್ಸ್ ನೀರನ್ನು ಸದ್ಬಳಕೆ ಮಾಡಲು ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರಡಿ ಬರುವ ಉಪ ಯೋಜನೆಗಳ ಕಾಲುವೆ ಜಾಲದಿಂದ ಗುರುತ್ವಾಕರ್ಷಣೆಯಿಂದ/ಲಿಫ್ಟ್ ಮುಖಾಂತರ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ಬರುವ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳಿಗೆ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಸಲುವಾಗಿ ಕೆರೆಗಳಿಗೆ ನೀರು ತುಂಬಿಸಲಾಗುತ್ತಿದೆ.

ಸಂಖ್ಯೆ: ಜಸಂಇ 64 ಡಬ್ಲ್ಯೂಬಿಎಂ 2024

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿಗಳು